12. 1999ರ ಮಾರ್ಚ್ ಅಂತ್ಯದೊಳಗಾಗಿ 'ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1,79,96,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

13. 1999ರ ಮಾರ್ಚ್ ಅಂತ್ಯದೊಳಗಾಗಿ 'ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಕಲ್ಯಾಣ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 58,77,68,000 ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ, 10,00,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

ಅಧ್ಯಕ್ಷರು : ಮಂಡಿಸಲಾಗಿದೆ.

ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಕರ್ನಾಟಕ ಧನ ವಿನಿಯೋಗ (ನಂ.1) 1998

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಉಪಮುಖ್ಯಮಂತ್ರಿಗಳು) ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

---

* *ಅನುಬಂಧ I*